**ಕರ್ನಾಟಕ ವಿಧಾನ ಪರಿಷತ್**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 935 |
| ಸದಸ್ಯರ ಹೆಸರು | : | ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 18.12.2018 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು. |

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಯಾವ ಯಾವ ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿ ಎಷ್ಟು ಗ್ರಾಮ ಸಭೆಗಳಿಗೆ ಗೈರು ಹಾಜರಾದ ಸದಸ್ಯರುಗಳ ಸದಸ್ಯತ್ವವನ್ನು ರದ್ದುಗೊಳಿಸಲಾಗಿದೆ; ಇದಕ್ಕೆ ಇರುವ ಮಾನದಂಡಗಳೇನು; (ಸ್ಪಷ್ಟ ಮಾಹಿತಿ ನೀಡುವುದು) | ರಾಜ್ಯದ ಗ್ರಾಮ ಪಂಚಾಯತಿಗಳು ನಡೆಸುವ ಗ್ರಾಮ ಸಭೆಗಳಿಗೆ ಗೈರು ಹಾಜರಾದ ಸದಸ್ಯರುಗಳ ಸದಸ್ಯತ್ವನ್ನು ರದ್ದುಗೊಳಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರಲ್ಲಿ ಅವಕಾಶವಿರುವುದಿಲ್ಲ. |
| ಆ | ಗ್ರಾಮ ಪಂಚಾಯತ್ ಸದಸ್ಯರುಗಳು ಈ ರೀತಿ ಗ್ರಾಮ ಸಭೆಗಳಿಗೆ ಗೈರುಹಾಜರಾಗುವುದರಿಂದ ಗ್ರಾಮದ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗುವುದಿಲ್ಲವೇ: (ವಿವರ ನೀಡುವುದು) | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 3-ಜಿ ರನ್ವಯ ಎಲ್ಲಾ ಗ್ರಾಮ ಪಂಚಾಯಿತಿಗಳು ಪ್ರತಿ ವರ್ಷ 2 ಬಾರಿ ಗ್ರಾಮ ಸಭೆಗಳನ್ನು ನಡೆಸುವುದನ್ನು ಕಡ್ಡಾಯಗೊಳಿಸಲಾಗಿದೆ. ಗ್ರಾಮ ಸಭೆಗಳು ಆಯಾ ಗ್ರಾಮ ಪಂಚಾಯಿಗಳ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ನಡೆಯುತ್ತವೆ. ಗ್ರಾಮ ಸಭೆಗಳಲ್ಲಿ ಗ್ರಾಮ ಪಂಚಾಯಿತಿ ಸದಸ್ಯರು ಭಾಗವಹಿಸುವುದರಿಂದ ಜನರ ಸಮಸ್ಯೆಗಳನ್ನು ಅರ್ಥ ಮಾಡಿಕೊಂಡು ಅವುಗಳನ್ನು ಪರಿಹರಿಸಲು ಅನುಕೂಲವಾಗುತ್ತದೆ. ಆದರೆ ಗ್ರಾಮ ಪಂಚಾಯತಿ ಸದಸ್ಯರುಗಳು ಗ್ರಾಮ ಸಭೆಯಲ್ಲಿ ಭಾಗವಹಿಸುವುದು ಅವರ ಕರ್ತವ್ಯವಾಗಿರುತ್ತದೆ. |
| ಇ | ರಾಜ್ಯದ ಯಾವ ಯಾವ ಗ್ರಾಮ ಪಂಚಾಯತ್‌ಗಳಲ್ಲಿ ಗ್ರಾಮ ಸಭೆಗೆ ಗೈರು ಹಾಜರಾದ ಸದಸ್ಯರುಗಳ ಸದಸ್ಯತ್ವವನ್ನು ರದ್ದುಗೊಳಿಸಲಾಗಿದೆ; (ಗ್ರಾಮ ಪಂಚಾಯತ್‌ವಾರು ಸದಸ್ಯರ ಹೆಸರಗಳೊಂದಿಗೆ ವಿವರ ನೀಡುವುದು) | ಅನ್ವಯಿಸುವುದಿಲ್ಲ. |
| ಈ | ಗ್ರಾಮ ಸಭೆಗೆ ಗೈರು ಹಾಜರಾಗಿರುವು ಸದಸ್ಯರ ವಿರುದ್ಧ ಕ್ರಮಕೈಗೊಳ್ಳುವ ಕುರಿತು ಇದುವರೆಗೂ ಎಷ್ಟು ಪ್ರಸ್ತಾವನೆಗಳು ಸರ್ಕಾರದಲ್ಲಿ ಸ್ವೀಕೃತವಾಗಿವೆ. ಈ ಕುರಿತು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು) | ಅನ್ವಯಿಸುವುದಿಲ್ಲ. |

ಸಂಖ್ಯೆ. ಗ್ರಾಅಪ 1241 ಗ್ರಾಪಂಅ 2018

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್,
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು
ಹಾಗೂ ಸಂಸದೀಯ ವ್ಯವಹಾರಗಳ ಸಚಿವರು.